# ದ್ವಿತೀಯ ಪಿ.ಯು.ಸಿ. ಮಾದರಿ ಪ್ರಶ್ನೆ ಪತ್ರಿಕೆ – 1

## 2020–21 ಸಾಲಿನ ಕಡಿತಗೊಂಡ ಪಠ್ಯಕ್ರಮ

## ವಿಷಯ : ಕನ್ನಡ

**ಅವಧಿ: 3–15 ಗಂಟೆ** **ಗರಿಷ್ಠ ಅಂಕಗಳು : 100**

---

### ಅ – ವಿಭಾಗ

I. **ಈ ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ :** **1x10=10**

1. ಯಾರು ಅನ್ಯಲಿಂಗವನ್ನು ನೆನೆಯುವುದಿಲ್ಲ?
2. ದುರ್ಗಂಧ ಬಿಡದಿರುವುದು ಯಾವುದು?
3. ಕನಸು ಬಂಡಿಯ ಕೆಳಗೆ ನಿದ್ರಿಸುವುದು ಹೇಗೆ?
4. ಯಾರ ಕಂಬನಿಯನ್ನೊರೆಸಿ ಜೀಸಸ್ ದಿನನಿತ್ಯ ಶಿಲುಬೆ ಏರಿದ್ದಾನೆ?
5. ಬಸಲಿಂಗನ ಹೆಂಡತಿಯ ಹೆಸರೇನು?
6. ಯಾವ ಮರ್ಯಾದೆಯನ್ನು ನಾವು ಮೀರಬಾರದು?
7. ಚಿಪ್ ಎಂದರೇನು?
8. ದುರ್ಗಪ್ಪ ಏನನ್ನು ಕೇಳಿ ಪಡೆಯಲು ಬಂದಿದ್ದನು?
9. ಆನೆ ಇಲ್ಲದ್ದರಿಂದ ವೇಲಾಯುಧ ಎಲ್ಲಿ ಕೆಲಸಕ್ಕೆ ಸೇರಿದ?
10. ಯಾವ ವಿಷಯ ಪ್ರಸ್ತಾಪಿಸಲು ಲೇಖಕರು ಮೀಟಿಂಗಿಗೆ ಹೋಗಿದ್ದರು?

### ಆ – ವಿಭಾಗ

II. **ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** **2x4=8**

11. ರಾವಣ ಅಂತಿಮವಾಗಿ ಯಾವ ನಿರ್ಧಾರಕ್ಕೆ ಬರುತ್ತಾನೆ?
12. ಹೆಂಡತಿಯ ಹರಿಬಕ್ಕಾಗಿ ಗಂಡುಗೂಸು ಏನು ಮಾಡುತ್ತಾನೆ?
13. ಶುಚಿ ಮತ್ತು ಸ್ವಾದಗಳನ್ನು ಕುರಿತು ಸೋಮನಾಥನ ಅಭಿಪ್ರಾಯಗಳೇನು?
14. ಹಡೆದ ತಂದೆ–ತಾಯಿಯರ ಮಹತ್ವ ತಿಳಿಸಿರಿ.
15. ಬೆಳಕು–ಬೇಟೆಗಾರ ಹೇಗೆ ಬರುತ್ತಾನೆ?

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** **2x3=6**

16. ಬ್ರಿಟಿಷರು ಬರುವ ಮೊದಲು ವಾಲ್‌ಪರೈ ಹೇಗಿತ್ತು?

17. ಸೀತಾಳ ಓದುವ ಆಸಕ್ತಿ ಹೇಗಿತ್ತು?

18. ತ್ರಿಭಾಷಾ ಸೂತ್ರದ ಬಳಕೆ ಹೇಗಿರಬೇಕು?

19. ಕುದುಪನಿಗೆ ಹನಿಗಣ್ಣಾಗಲು ಕಾರಣವೇನು?

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 2x3=6**

20. ಆನೆ ಸಾಕುವುದರ ಬಗ್ಗೆ ಜನರ ನಂಬಿಕೆ ಏನಾಗಿತ್ತು?

21. ಫಾರೆಸ್ಟ್ ಡಿಪಾರ್ಟ್‌ಮೆಂಟಿನವರ ನಂಬರ್‌ಒನ್ ಎನಿಮಿಗಳು ಯಾರು ಯಾರು?

22. ಅರಣ್ಯ ಇಲಾಖೆಯವರು ನಾಗರಾಜನನ್ನು ಕುರಿತು ಏನೆಂದು ಜಾಹೀರಾತು ನೀಡಿದರು?

23. ಹುಚ್ಚುನಾಯಿಗಳು ಆಸ್ಪತ್ರೆಯಲ್ಲಿ ಹೇಗೆ ವರ್ತಿಸುತ್ತವೆಂದು ಪುಟ್ಟಯ್ಯ ಹೇಳಿದ?

## ಇ – ವಿಭಾಗ

**III. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ. 3x2=6**

24. ಕುಸುಮ ವಾಸನೆಯಿಲ್ಲ ಕೂಡಲು ಸ್ಥಳವಿಲ್ಲ.

25. ಬಂಗಾರ ನಿನಗ ಸ್ಥಿರವಲ್ಲ.

26. ಯಾತನೆಗೂ ನಲ್ವಾತನೇ ನುಡಿವ ಮುಖಮುದ್ರೆ.

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ : 3x1=3**

27. ಬಸಲಿಂಗಪ್ಪ, ನೀನು ತುಂಬಾ ಒಳ್ಳೆಯವನು.

28. ವ್ಯಕ್ತಿಗಿಂತ ರಾಷ್ಟ್ರ ದೊಡ್ಡದು.

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ : 3x1=3**

29. ಕುಶಾಲಿಗಂತ ಸೊಂಡಿಲು ಬೀಸಿದರೆ ಸಾಕಲ್ಲ.

30. ಆನೆ ಬೇಲಿ ದಾಟಿ ಹೋಯ್ತು ಸಾರ್.

## ಈ – ವಿಭಾಗ

**IV. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 4x3=12**

31. ಬಸವಣ್ಣನವರ ಪ್ರಕಾರ ನೈಜಭಕ್ತಿಯ ಲಕ್ಷಣಗಳಾವುವು?

32. ಜ್ಞಾನವನ್ನು ಹೊಂದುವ ಮಾರ್ಗ ಯಾವುದೆಂಬುದನ್ನು ಸೋಮನಾಥನು ಹೇಗೆ ವಿವರಿಸಿದ್ದಾನೆ?

33. 'ಬೆಳಗು ಜಾವ' ಕವನದ ಮೂಲಕ ಕವಿ ಬೇಂದ್ರೆ ಹೇಳಿರುವ ವಿಚಾರಗಳಾವುವು?

34. ಮುಂಬೈ ಜಾತಕದಲ್ಲಿ ಮಕ್ಕಳ ಬಾಲ್ಯದ ಚಿತ್ರಣ ಹೇಗೆ ನಿರೂಪಿತವಾಗಿದೆ?

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 4x2=8**

35. ಅಂತಾರಾಷ್ಟ್ರೀಯ ವಿದ್ಯಮಾನಗಳಿಂದಾಗಿ ವಾಲ್‌ಪರ್ಯೈಗೆ ಒದಗಿದ ಸಮಸ್ಯೆಗಳೇನು?

36. ಬದುಕಿನಲ್ಲಿ ಆಯ್ಕೆಗಳು ಮುಖ್ಯ ಎಂಬುದನ್ನು ಲೇಖಕಿ ನೇಮಿಚಂದ್ರ ಹೇಗೆ ನಿರೂಪಿಸಿದ್ದಾರೆ?

37. ಧಣಿ ಹಾಗೂ ಹೊಳೆಯ ನಡುವಿನ ಸಮರವನ್ನು ಚಿತ್ರಿಸಿ.

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 4x2=8**

38. ಕಾಡಾನೆಗಳ ಹಾವಳಿ ನಿರೂಪಕರ ಅನುಭವಕ್ಕೆ ಬಂದುದು ಹೇಗೆ?

39. ಪುಟ್ಟಯ್ಯ ತನ್ನ ಅಸಹಾಯಕತೆಯನ್ನು ಹೇಗೆ ವಿವರಿಸುತ್ತಾನೆ?

40. ತನ್ನ ಆನೆಯ ಬಗ್ಗೆ ಕೃಷ್ಣೇಗೌಡನಲ್ಲಿ ಬೇಸರ ಮೂಡಲು ಕಾರಣಗಳೇನು?

## ಉ – ವಿಭಾಗ

**V. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ : 5x1=5**

41. ಕರುಣಿಸುವೊಡೆನಗೆ ದಶಕಂ
ಧರ ಧುರದೊಳ್ ರಘುತನೂಜನಾಯುಃಪ್ರಾಣಂ
ಬರೆಗಂ ಬಾರದಿರೆನುತುಂ
ಧರಿತ್ರಿಯೊಳ್ ಮೈಯನೊಕ್ಕು ಮೂರ್ಚೆಗೆ ಸಂದಳ್

42. ಎಲ್ಲರೊಳು ಕಲಿಭೀಮನೇ ಮಿಡು
ಕುಳ್ಳ ಗಂಡನು ಹಾನಿ ಹರಿಬಕೆ
ನಿಲ್ಲದಂಗೈಸುವನು ಕಡು ಹೀಹಾಳಿಯುಳ್ಳವನು
ಖುಲ್ಲನಿವನುಪಟಳವನಾತಂ
ಗೆಲ್ಲವನು ಹೇಳುವೆನು ಬಳಿಕವ
ನಲ್ಲಿ ಹುರುಳಿಲ್ಲದೊಡೆ ಕುಡಿವೆನು ಘೋರತರ ವಿಷವ

## ಭಾಷಾಭ್ಯಾಸ

**VI. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗನುಗುಣವಾಗಿ ಉತ್ತರಿಸಿ : 2x6=12**

43. ಈ ಪದಗಳಿಗೆ ಅರ್ಥ ಬರೆಯಿರಿ : ಕುಗುರು, ಎಚ್ಚಾಳುತ

44. ಈ ಕ್ರಿಯಾಪದಗಳ ನಿಷೇಧರೂಪ ಬರೆಯಿರಿ : ಬರೆಯುವನು, ಕರೆಯಿತು

45. ಈ ಪದಗಳ ತತ್ಸಮ/ತದ್ಭವರೂಪ ಬರೆಯಿರಿ : ಪರಿಕಿಸು, ಘೂಕ

46. ಈ ಪದಗಳ ನಾನಾರ್ಥಗಳನ್ನು ಬರೆಯಿರಿ : ನೆರೆ, ಕೊನೆ

47. ಈ ಪದಗಳಲ್ಲಿನ ಗುಣವಾಚಕಗಳನ್ನು ಗುರುತಿಸಿರಿ : ಘೋರಪಾಪಿ, ಹಸಿರುಕಂಬಳಿ

48. ಈ ಪದಗಳ ವಿಭಕ್ತಿ ಪ್ರತ್ಯಯಗಳನ್ನು ಬರೆಯಿರಿ : ಧರೆಯೊಳ್ , ಪಾಪಿಗೆ

49. ಈ ಪದಗಳನ್ನು ಬಳಸಿ ಸ್ವಂತವಾಕ್ಯ ರಚಿಸಿರಿ : ಕೈಯೊಡ್ಡು , ತಲೆಬಾಗು

**ಆ) ಈ ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪ್ರಬಂಧವನ್ನು ಬರೆಯಿರಿ : 5x1=5**

50. ರಕ್ತದಾನ ಮತ್ತು ನೇತ್ರದಾನಗಳ ಮಹತ್ತ್ವ

51. ಕ್ರೀಡೆ ಮತ್ತು ನಮ್ಮ ಆರೋಗ್ಯ

**ಇ) ಪತ್ರಲೇಖನ : ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪತ್ರ ಬರೆಯಿರಿ : 4x1=4**

52. ಪರೀಕ್ಷಾ ಸಿದ್ಧತೆಯ ಕುರಿತು ನಿಮ್ಮ ತಂದೆಗೊಂದು ಪತ್ರ ಬರೆಯಿರಿ
53. ಶೈಕ್ಷಣಿಕ ಸಾಲ ಒದಗಿಸುವಂತೆ ಕೋರಿ ಬ್ಯಾಂಕಿನ ಪ್ರಬಂಧಕರಿಗೊಂದು ಪತ್ರ ಬರೆಯಿರಿ.

**ಈ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ 4x1=4**

54. ಆಳಾಗಿ ದುಡಿ, ಅರಸಾಗಿ ಉಣ್ಣು

55. ಹಣಕ್ಕಿಂತ ಗುಣ ಮುಖ್ಯ.

##############################

# ದ್ವಿತೀಯ ಪಿ.ಯು.ಸಿ. ಮಾದರಿ ಪ್ರಶ್ನೆ ಪತ್ರಿಕೆ – 2

## 2020–21 ಸಾಲಿನ ಕಡಿತಗೊಂಡ ಪಠ್ಯಕ್ರಮ

## ವಿಷಯ : ಕನ್ನಡ

**ಅವಧಿ: 3–15 ಗಂಟೆ** **ಗರಿಷ್ಠ ಅಂಕಗಳು : 100**

---

### ಅ – ವಿಭಾಗ

**I. ಈ ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ : 1x10=10**

1. ಶಿವಪಥವನ್ನು ಅರಿಯದಿದ್ದರೆ ಏನಾಗುವುದು?
2. ಯಾವ ಮಾತಿಗೆ ಕೊನೆಯಿಲ್ಲವೆಂದು ಪುರಂದರದಾಸರು ಹೇಳಿದ್ದಾರೆ?
3. ಎಂತಹ ನೆರೆಯವರು ಇರಬೇಕು?
4. ಲಕ್ಷಾದಾರಿಗಳ ಚದುರಂಗದಾಟ ಯಾವುದು?
5. ದುರಾಸೆಯ ಹುಡುಗನನ್ನು ನಿರಾಕರಿಸಿದವರು ಯಾರು?
6. ಬದುಕು ಯಾವುದನ್ನು ಬಿಟ್ಟು ಇರುವುದಿಲ್ಲ?
7. ಕಲಾಂ ಅವರ ಆತ್ಮಚರಿತ್ರೆಯ ಹೆಸರೇನು?
8. ದುರ್ಗಪ್ಪನ ಪ್ರಕಾರ ತರ್ಲೆ ಡಿಪಾರ್ಟಮೆಂಟ್ ಯಾವುದು?
9. ನಿರೂಪಕರ ಇಕಾಲಜಿಸ್ಟ್ ಗೆಳೆಯ ಯಾರು?
10. ಆನೆಶಾಸ್ತ್ರದವನು ಏನೆಂದು ಭವಿಷ್ಯ ನುಡಿದಿದ್ದನು?

### ಆ – ವಿಭಾಗ

**II. ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 2x4=8**

11. ರಾವಣ ತನ್ನ ಅಂತಃಪುರದ ಸ್ತ್ರೀಯರನ್ನು ಹೇಗೆ ಸಂತೈಸಿದನು?
12. ಸೂರ್ಯ ಮತ್ತು ದೀಪಗಳಿಂದಾಗುವ ಉಪಯೋಗಗಳಾವವು?
13. ಕೊಲಲಕ್ಷಮರೆಂದು ದ್ರೌಪದಿ ಯಾರನ್ನು ಕುರಿತು ಹೇಳಿದ್ದಾಳೆ?
14. ಯಾರಿಂದ ಯಾವುದನ್ನು ಹೇಗೆ ಕಲಿಯಬೇಕೆಂದು ಸೋಮನಾಥನು ಹೇಳಿದ್ದಾನೆ?
15. ಕ್ರಿಸ್ಮಸ್ ಮನೆಗೆ ಏನನ್ನು ಹೊತ್ತು ತಂದಿದೆ?

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 2x3=6**

16. ಸಿದ್ಲಿಂಗಿ ಏಕೆ ರಾದ್ಧಾಂತ ಮಾಡಿದಳು?

17. ಸಿಂಹಬಾಲದ ಕೋತಿಗಳಿಗೆ ಒದಗಿದ ತೊಂದರೆ ಏನು?

18. ತಾನು ಅದೃಷ್ಟವಂತೆ ಎಂದು ಲೇಖಕಿ ನೇಮಿಚಂದ್ರ ಭಾವಿಸಲು ಕಾರಣವೇನು?

19. ಮುಸುರೆ ಪಾತ್ರೆಗಳ 'ಒಡೆಯ' ಏನೆಂದು ಯೋಚಿಸಿದನು?

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 2x3=6**

20. ಸೊರಗಿದ್ದ ಆನೆಯನ್ನು ಕೃಷ್ಣೇಗೌಡ ಹೇಗೆ ಸಾಕಿದ?

21. ನಾಗರಾಜ ದುರ್ಗಪ್ಪನ ಮೇಲೆ ಏನೆಂದು ರೇಗಿದನು?

22. ನಾಯಿ ಕಚ್ಚಿದ್ದೆಲ್ಲಿ ಎಂದಾಗ ಜಬ್ಬಾರ್ ಇರುಸುಮುರುಸಿನಿಂದ ಏನು ಹೇಳಿದನು?

23. ಆನೆಯನ್ನು ಹದ್ದುಬಸ್ತಿನಲ್ಲಿಡುವುದರ ಬಗ್ಗೆ ವೇಲಾಯುಧನ ಅಪ್ಪ ಏನು ತಿಳಿಸಿದ್ದ?

## ಇ – ವಿಭಾಗ

III. **ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ,ಸ್ವಾರಸ್ಯ ವಿವರಿಸಿ. 3x2=6**

24. ತಾಯ ಮೊಲೆವಾಲು ನಂಜಾಗಿ ಕೊಲುವಡೆ.

25. ಕಾಲೋಚಿತಕ್ಕೈದಿದಾ ತೃಣವೇ ಪರ್ವತವಲ್ಲವೇ.

26. ಬಂದೇ ತೀರುತ್ತದೆ ದೈವೀರಾಜ್ಯ.

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ : 3x1=3**

27. ಈ ಪ್ರದೇಶಕ್ಕೆ ಆಗ ಹೆಸರೇ ಇರಲಿಲ್ಲ.

28. ಇದೇ ಲೋಟವಲ್ಲವೇ.... ತನ್ನ ಬೆವರಿನ ಬೆಲೆ ಕಳೆದದ್ದು.

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ : 3x1=3**

29. ನಮ್ಮ ಕಡೆ ಕೆಮ್ಮು ಕಾಲಿಂಗ್‌ಬೆಲ್ ಇದ್ದಹಾಗೆ.

30. ಈ ಕಂಬದೊಳ್ಗೆ ಏನೋ ಸೇರ್ಕೊಂಡಿದೆ.

## ಈ – ವಿಭಾಗ

IV. **ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 4x3=12**

31. ದ್ರೌಪದಿ ಅವಮಾನಕ್ಕೊಳಗಾದ ಮೂರು ಪ್ರಸಂಗಗಳನ್ನು ವಿವರಿಸಿರಿ..

32. ಜಾಲಿಯ ಮರವು ನಿರುಪಯುಕ್ತವೆಂಬುದನ್ನು ಪುರಂದರದಾಸರು ಹೇಗೆ ನಿರೂಪಿಸಿದ್ದಾರೆ?

33. 'ಬಂಗಾರ ನಿನಗ ಸ್ಥಿರವಲ್ಲ' ಎಂಬ ಮಾತಿನ ಸ್ವಾರಸ್ಯವನ್ನು ವಿವರಿಸಿರಿ.

34. ಮುಂಬೈ ಜಾತಕದಲ್ಲಿ ಮಕ್ಕಳ ಬಾಲ್ಯದ ಚಿತ್ರಣ ಹೇಗೆ ನಿರೂಪಿತವಾಗಿದೆ?

**ಆ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 4x2=8**

35. ಬಸಲಿಂಗ ಕೊನೆಯಲ್ಲಿ ತೆಗೆದುಕೊಂಡ ನಿರ್ಧಾರ ಯಾವುದು? ಅದಕ್ಕೆ ಕಾರಣಗಳೇನು?

36. ಪೋಷಕರು ಖಾಸಗಿ ಶಾಲೆಗಳ ಕಡೆ ಹೊರಳಲು ಹಾಮಾನಾ ಯಾವ ಕಾರಣಗಳನ್ನು ಉದಾಹರಿಸುತ್ತಾರೆ?

37. ತಮ್ಮನ್ನು ಭೇಟಿಯಾದ ಮಕ್ಕಳಿಗೆ ಕಲಾಂ ಹೇಳಿದ್ದೇನು?

**ಇ) ಈ ಕೆಳಗಿನವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ : 4 x2=8**

38. ಆನೆ ಮತ್ತು ಮಾವುತ ವೇಲಾಯುಧನನ್ನು ಸಾಗಹಾಕಲು ಮಠದವರು ಹವಣಿಸಿದ್ದೇಕೆ?

39. ನಿದ್ರೆ ಮಂಪರಿನಲ್ಲಿದ್ದ ಡ್ರೈವರ್ ಪರಂಧಾಮಕ್ಕೆ ಹೋದ ಸಂದರ್ಭವನ್ನು ವಿವರಿಸಿ.

40. ನಾಗರಾಜನ ನಿಗೂಢ ಸಾವಿನ ಬಗ್ಗೆ ಜನರ ಅಭಿಪ್ರಾಯಗಳೇನು? ವಿವರಿಸಿ.

## ಉ – ವಿಭಾಗ

V. **ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ : 5x1=5**

41. ಕದಡಿದ ಸಲಿಲಂ ತಿಳಿವಂ
ದದೆ ತನ್ನಿಂ ತಾನೆ ತಿಳಿದ ದಶವದನಂಗಾ
ದುದು ವೈರಾಗ್ಯಂ ಸೀತೆಯೊ
ಳುದಾತ್ತನೊಳ್ ಪುಟ್ಟದಲ್ತೆ ನೀಲೀರಾಗಂ

42. ಯಾವಾಗೊ ಕೋಳಿ ಕೂಗಿಹುದು ಏಳಿ, ತಡವೇಕೆ ಪಾನಕೇಳಿ
ಮೊದಲಾಗಲೀಗ, ಅಂಗಡಿಯ ಕದವ ಈ ಕ್ಷಣಕೆ ತೆರೆಯ ಹೇಳಿ
ಜೀವನದ ನದಿಗೆ ಸೆಳವಿಹುದು, ಮರಣ ಬಂದೀತು ಕ್ಷಣವು ಉರುಳಿ
ಹೋದವರು ತಿರಗಿ ಬಂದಾರೆ, ಅವರು ಬರಲಿಕ್ಕು ಇಲ್ಲ ಮರಳಿ

## ಭಾಷಾಭ್ಯಾಸ

VI. **ಅ) ಈ ಕೆಳಗಿನವುಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗನುಗುಣವಾಗಿ ಉತ್ತರಿಸಿ : 2x6=12**

43. ಈ ಪದಗಳಿಗೆ ಸಮಾನಾರ್ಥಗಳನ್ನು ಬರೆಯಿರಿ : ಕಾಂತಾರ, ಗೃಹ.

44. ಈ ಪದಗಳ ಕಾಲಸೂಚಕಗಳನ್ನು ಬರೆಯಿರಿ : ಬರುತ್ತಾರೆ, ಹೋದೆವು.

45. ಈ ಪದಗಳ ತತ್ಸಮ/ತದ್ಭವರೂಪ ಬರೆಯಿರಿ : ಶಿರ, ಜೋಗಿ.

46. ಈ ಕ್ರಿಯಾಪದಗಳ ಧಾತುವನ್ನು ಬರೆಯಿರಿ : ಎದ್ದರು, ನಲಿಯುತ್ತಾ.

47. ಈ ಪದಗಳ ವಿಭಕ್ತಿ ಪ್ರತ್ಯಯಗಳನ್ನು ಬರೆಯಿರಿ : ಅಂಧಕನು, ಸಲಿಲಂ.

48. ಈ ಪದಗಳಲ್ಲಿನ ಗುಣವಾಚಕಗಳನ್ನು ಗುರುತಿಸಿರಿ : ವಕ್ತ್ರಪದ್ಮ, ಅಪ್ರತಿಮಲ್ಲ .

49. ಈ ಪದಗಳನ್ನು ಬಳಸಿ ಸ್ವಂತವಾಕ್ಯ ರಚಿಸಿರಿ : ಪರಿಪರಿಯಾಗಿ, ಬೇರೂರು.

**ಆ) ಈ ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪ್ರಬಂಧವನ್ನು ಬರೆಯಿರಿ : 5x1=5**

50. ಸಾಂಕ್ರಾಮಿಕ ರೋಗಗಳ ಬಗ್ಗೆ ವಹಿಸಬೇಕಾದ ಎಚ್ಚರಿಕೆಗಳು.

51. ಹೆಚ್ಚುತ್ತಿರುವ ವೃದ್ಧಾಶ್ರಮಗಳು.

**ಇ) ಪತ್ರಲೇಖನ : ಕೆಳಗಿನವುಗಳಲ್ಲಿ ಒಂದನ್ನು ಕುರಿತು ಪತ್ರ ಬರೆಯಿರಿ : 4 x1=4**

52. ಮನೆಯಲ್ಲೇ ಕುಳಿತು ವಿಡಿಯೋ ಪಾಠ ನೋಡಿದ ಅನುಭವದ ಕುರಿತು ನಿಮ್ಮ ಗೆಳೆಯ/ಗೆಳತಿಗೊಂದು ಪತ್ರ ಬರೆಯಿರಿ.

53. ಕನ್ನಡ ಶಬ್ದಕೋಶವೊಂದನ್ನು ಕಳುಹಿಸುವಂತೆ ಪುಸ್ತಕ ಮಳಿಗೆಗೊಂದು ಪತ್ರ ಬರೆಯಿರಿ.

**ಈ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ 4x1=4**

54. ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೇ!

55. ಕೋಣನಿಗೆ ದೊಣ್ಣೆಯ ಪೆಟ್ಟು, ಜಾಣನಿಗೆ ಮಾತಿನ ಪೆಟ್ಟು

##############################################